# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 260
ಸದಸ್ಯರ ಹೆಸರು : ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 12-07-2018
ಉತ್ತರಿಸುವ ಸಚಿವರು : ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು.

| | ಪ್ರಶ್ನೆ | ಉತ್ತರ |
|---|---|---|
| ಅ | ಸರ್ಕಾರಿ ಪದವಿ ಪೂರ್ವ ಕಾಲೇಜಗಳ ಉಪನ್ಯಾಸಕರ ನೇಮಕಾತಿ ಆದೇಶ ಸಂಖ್ಯೆ:ಇಡಿ/ಕೆಇಎ/ಆಡಳಿತ/ಸಿ.ಆರ್-54/2014-15, ದಿನಾಂಕ:28-02-2017ರ ಅಧಿಸೂಚನೆ ಪ್ರಕ್ರಿಯೆ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು |
| ಆ. | ಸದರಿ ನೇಮಕಾತಿ ಪ್ರಕ್ರಿಯೆ ವಿಳಂಬವಾಗಲು ಕಾರಣಗಳೇನು; | ಕರ್ನಾಟಕ ಪರೀಕ್ಷಾ ಪ್ರಾಧಿಕಾರವು ಉಪನ್ಯಾಸಕರ ನೇಮಕಾತಿಗೆ ಸಂಬಂಧಿಸಿದಂತೆ ಎಲ್ಲಾ ಪೂರ್ವ ಸಿದ್ಧತೆಗಳನ್ನು ಪೂರ್ಣಗೊಳಿಸಿದ್ದು, ವಿಷಯವಾರು ವೇಳಾಪಟ್ಟಿಯನ್ನು ಕೆ.ಇ.ಎ. ವೆಬ್‌ಸೈಟ್‌ನಲ್ಲಿ ಪ್ರಕಟಿಸಿ, ಆಕ್ಷೇಪಣೆಗಳನ್ನು ದಿನಾಂಕ:28-06-2018ರೊಳಗೆ ಸಲ್ಲಿಸಲು ತಿಳಿಸಲಾಗಿದೆ. ಬಂದಿರುವ ಆಕ್ಷೇಪಣೆಗಳನ್ನು ನಿಯಮಾನುಸಾರ ಪರಿಶೀಲಿಸಿ, ಅಂತಿಮ ಪರೀಕ್ಷಾ ವೇಳಾಪಟ್ಟಿಯನ್ನು ಜುಲೈ ತಿಂಗಳ ಅಂತ್ಯದೊಳಗೆ ಪ್ರಕಟಿಸಲಾಗುವುದು. 2018ನೇ ಸಾಲಿನ ಸೆಪ್ಟೆಂಬರ್ -ಅಕ್ಟೋಬರ್ ತಿಂಗಳಲ್ಲಿ ಪರೀಕ್ಷೆ ನಡೆಸುವ ಸಾಧ್ಯತೆ ಇರುತ್ತದೆ. ಈ ಬಗ್ಗೆ ಜುಲೈ 2018ರ ಅಂತ್ಯದೊಳಗೆ ಪರೀಕ್ಷಾ ವೇಳಾಪಟ್ಟಿಯನ್ನು ಹೊರಡಿಸಲು ಕ್ರಮವಹಿಸಲಾಗುವುದು. |
| ಇ. | ನೇಮಕಾತಿ ಪ್ರಕ್ರಿಯೆ ಕುಂಠಿತಗೊಳ್ಳುವುದರಿಂದ ಅಭ್ಯರ್ಥಿಗಳು ವಯೋಮಿತಿ ಮೀರಿದರೆ ನೇಮಕಾತಿಯಲ್ಲಿ ನಮ್ಮನ್ನು ಕಡೆಗಣಿಸುತ್ತಾರೆ ಎಂಬ ಆತಂಕದಲ್ಲಿರುವುದನ್ನು ಹೋಗಲಾಡಿಸಲು ಸರ್ಕಾರ ಹೊರಡಿಸಿರುವ ಮಾರ್ಗಸೂಚಿಗಳೇನು? | |
| ಈ. | ಸದರಿ ನೇಮಕಾತಿ ಪ್ರಕ್ರಿಯೆ ವಿಳಂಬಾಗುತ್ತಿರವುದರಿಂದ ಅಭ್ಯರ್ಥಿಗಳು ಗೊಂದಲದಲ್ಲಿರುವುದನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಮುಂಜಾಗ್ರತಾ ಕ್ರಮಗಳೇನು? | |

ಸಂಖ್ಯೆ: ಇಡಿ 185 ಡಿಜಿಡಬ್ಲ್ಯೂ 2018

(ಎನ್.ಮಹೇಶ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು.